07/01/17

# ಶೀಘ್ರ ನಿರಂತರ ಸೋಲಾರ್ ವಿದ್ಯುತ್

**ತುಮಕೂರು:** ಇನ್ನು ಕೆಲವೇ ತಿಂಗಳಲ್ಲಿ ಬೇಸಾಯಕ್ಕೆ ಅನುಕೂಲವಾಗುವಂತೆ ರೈತರಿಗೆ ಹಗಲು ಹೊತ್ತಿನಲ್ಲೂ ಸೋಲಾರ್ ವಿದ್ಯುತ್ತನ್ನು ನೀಡುವ ಮೂಲಕ ಯಾವುದೇ ಕ್ಷಣದಲ್ಲಿ ವಿದ್ಯುತ್ ಸರಬರಾಜಿಗೆ ಕೊರತೆಯಾಗದಂತೆ ನೋಡಿಕೊಳ್ಳಲಾಗುವುದು ಎಂದು ಇಂಧನ ಸಚಿವ ಡಿ.ಕೆ.ಶಿವಕುಮಾರ್ ಭರವಸೆ ನೀಡಿದರು.

ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಗೂಳೂರಿನಲ್ಲಿ ಕಾಂಗ್ರೆಸ್ ಬೃಹತ್ ಕಾರ್ಯಕರ್ತರ ಸಭೆಯನ್ನುದ್ದೇಶಿಸಿ ಮಾತನಾಡಿ, ಪಾವಗಡದಲ್ಲಿ 2 ಸಾವಿರ ಮೆಗಾ ವ್ಯಾಟ್ ಸೋಲಾರ್ ವಿದ್ಯುತ್ ಉತ್ಪಾದಿಸಲು ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗಿದೆ. ಆದ್ದರಿಂದ ನಿರಂತರ ವಿದ್ಯುತ್ ನೀಡಲಾಗುತ್ತದೆ. ಖಾಸಗಿ ಕಂಪನಿಗಳು ವಿದ್ಯುತ್ ಉತ್ಪಾದಿಸಲು ಮುಂದೆ ಬಂದಿರುವುದರಿಂದ ಮತ್ತೆ ಪಾವಗಡದಲ್ಲಿ 6 ಸಾವಿರ ಎಕರೆಯನ್ನು ರೈತರಿಂದ ಮಾಸಿಕ ಬಾಡಿಗೆಗೆ ಪಡೆದುಕೊಂಡಿದ್ದೇನೆ. ರಾಜ್ಯದ 167 ತಾಲ್ಲೂಕುಗಳಲ್ಲಿ ಸೋಲಾರ್ ವಿದ್ಯುತ್ ಉತ್ಪಾದನೆಯಾಗಲಿದೆ. ಇದರಿಂದ ರಾಜ್ಯದಲ್ಲಿ ವಿದ್ಯುತ್ ಅಭಾವ ನೀಗಲಿದೆ ಎಂದರು.

ಮಂಡ್ಯ, ಹಾಸನ, ತುಮಕೂರು ಜಿಲ್ಲೆಗಳಲ್ಲಿ ಒಂದಿಷ್ಟು ಶಾಸಕರನ್ನು ಹೊಂದಿರುವ ಜೆಡಿಎಸ್ ಪಕ್ಷ ಅಧಿಕಾರಕ್ಕೆ ಬರಲು ಸಾಧ್ಯವೇ ಇಲ್ಲ. ಆ ಪಕ್ಷದ ನಾಯಕ ಎಚ್.ಡಿ.ಕುಮಾರಸ್ವಾಮಿ ನಾವು ಅಧಿಕಾರಕ್ಕೆ ಬಂದರೆ ಎತ್ತಿನಹೊಳೆ ಯೋಜನೆ ಸ್ಥಗಿತಗೊಳಿಸುತ್ತೇನೆ ಎಂದಿದ್ದಾರೆ. 13 ಸಾವಿರ ಕೋಟಿ ರೂ, ವೆಚ್ಚ ಮಾಡಿ, ಹಾಸನ, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ, ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಗೆ ಕುಡಿಯುವ ನೀರು ಒದಗಿಸುವ ಕಾಮಗಾರಿ ಸಾಕಷ್ಟು ಆಗಿದೆ. ಅವರ ಹೇಳಿಕೆಯಿಂದ ನಮ್ಮ ಪಕ್ಷಕ್ಕೆ ಲಾಭವಾಗುತ್ತದೆ. ಭ್ರಷ್ಟಾಚಾರ ಮಾಡಿ, ಜೈಲು ಸೇರಿದ್ದ ಬಿಜೆಪಿ ನಾಯಕರು ತಮ್ಮ ಪಕ್ಷ ಅಧಿಕಾರದಲ್ಲಿದ್ದಾಗ ಹೆಗ್ಗುರುತು ತೋರಿಸುವಂತಹ ಯಾವ ಸಾಧನೆ ಮಾಡಿದ್ದಾರೆ ಎಂದು ಪ್ರಶ್ನಿಸಿದರು.

ಕಾಂಗ್ರೆಸ್ ಸರ್ಕಾರ ಸೋಲಾರ್ ಯೋಜನೆ ಸೇರಿದಂತೆ 160 ಯೋಜನೆಗಳನ್ನು ರೂಪಿಸಿ, ಬಡವರ ಏಳಿಗೆಗೆ ಕಾರಣವಾಗಿದೆ. ಆದ್ದರಿಂದ ನಮ್ಮ ಪಕ್ಷವನ್ನು ಅಧಿಕಾರಕ್ಕೆ ತರಲು ಮತದಾರರು ಸಿದ್ಧವಿದ್ದಾರೆ. ಪಕ್ಷದ ಕಾರ್ಯಕರ್ತರು ಅವರ ಮನ ಒಲಿಸಬೇಕು ಎಂದರು.

ಕೆಪಿಸಿಸಿ ಅಧ್ಯಕ್ಷ ಡಾ.ಜಿ.ಪರಮೇಶ್ವರ್, ಸಚಿವ ಟಿ.ಬಿ. ಜಯಚಂದ್ರ, ಸಂಸದರಾದ ಮುದ್ದಹನುಮೇಗೌಡ, ಚಂದ್ರಪ್ಪ, ಕೆ.ಎಚ್.ಮುನಿಯಪ್ಪ ಉಪಸ್ಥಿತರಿದ್ದರು.

---

ಪ್ರಜಾವಾಣಿ 07/01/2018 (3)

### ಹೆಸರಘಟ್ಟ ಬಳಿ ವಿದ್ಯುತ್ ತಂತಿ ಸ್ಪರ್ಶಿಸಿ ₹ 60 ಸಾವಿರ ಮೌಲ್ಯದ ರಾಗಿ ತೆನೆ ಬೆಂಕಿಗೆ ಆಹುತಿ

# ‘ಕೈಗೆ ಬಂದ ತುತ್ತು ಬಾಯಿಗೆ ಬರಲಿಲ್ಲ’

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ದೊಡ್ಡ ಬಳ್ಳಾಪುರದ ಕಾಡನೂರು ಗ್ರಾಮದಿಂದ ಟ್ರ್ಯಾಕ್ಟರ್ ಮೂಲಕ ರಾಗಿ ತೆನೆ ತರುವಾಗ ಹುಲ್ಲಿಗೆ ವಿದ್ಯುತ್ ತಂತಿ ಸ್ಪರ್ಶಿಸಿ ಟ್ರ್ಯಾಕ್ಟರ್ ಹೊತ್ತಿ ಉರಿದ ಘಟನೆ ಹೆಸರಘಟ್ಟ ಗ್ರಾಮದ ಕೆರೆ ರಸ್ತೆಯಲ್ಲಿ ನಡೆದಿದೆ.

ಹುಲ್ಲಿಗೆ ಹತ್ತಿದ ಬೆಂಕಿ ಬಹುಬೇಗನೆ ಇಡೀ ಟ್ರ್ಯಾಕ್ಟರನ್ನು ಆವರಿಸಿಕೊಂಡಿತ್ತು ಎಂದು ಪ್ರತ್ಯಕ್ಷದರ್ಶಿಯೊಬ್ಬರು ವಿವರಿಸಿದರು.

ಟ್ರ್ಯಾಕ್ಟರ್‌ಗೆ ಬೆಂಕಿ ಹತ್ತಿದ ಹತ್ತು ನಿಮಿಷಕ್ಕೆ ಪೀಣ್ಯ ವಿಭಾಗದಿಂದ ಬಂದ ಅಗ್ನಿಶಾಮಕ ದಳ ಸಿಬ್ಬಂದಿ ಬೆಂಕಿ ನಂದಿಸಿದರು.

ಟ್ರ್ಯಾಕ್ಟರ್‌ನ ನಾಲ್ಕು ಟೈರ್ ಸಂಪೂರ್ಣ ಬೆಂಕಿಗೆ ಆಹುತಿಯಾಗಿದೆ.

‘ಒಂದೂವರೆ ಎಕರೆ ಜಮೀನಿನಲ್ಲಿ ರಾಗಿಯನ್ನು ಬೆಳೆದಿದ್ದ. ಈ ವರ್ಷ ಉತ್ತಮ ಮಳೆಯಾಗಿ ಒಳ್ಳೆಯ ಇಳುವರಿ ಬಂದಿತ್ತು. ರಾಗಿಯನ್ನು ಕಟಾವು ಮಾಡಿ ಕಣ ಮಾಡಲು ಹೆಸರಘಟ್ಟ ಸಮೀಪ ಇರುವ ಮುದ್ದಿನಪಾಳ್ಯಕ್ಕೆ ತರುತ್ತಿದ್ದ. ಸುಮಾರು ₹60,000 ಮೌಲ್ಯದ ರಾಗಿ ತೆನೆ ಬೆಂಕಿಗೆ ಆಹುತಿಯಾಗಿದೆ. ರಾಗಿ ಬೆಳೆ ಚೆನ್ನಾಗಿ ಬಂತು. ಆದರೆ ಕೈಗೆ ಬಂದ ತುತ್ತು ಬಾಯಿಗೆ ಬರಲಿಲ್ಲ’ ಎಂದು ರೈತ ನಾಗರಾಜು ಬೇಸರ ವ್ಯಕ್ತಪಡಿಸಿದರು.

---

ವಿಜಯವಾಣಿ pg no 02

# ನಗರದಲ್ಲಿ ಇಂದು ವಿದ್ಯುತ್ ವ್ಯತ್ಯಯ

**ಬೆಂಗಳೂರು :** ಬೆಸ್ಕಾಂ ವ್ಯಾಪ್ತಿಯಲ್ಲಿ 66/11 ಕೆ.ವಿ ಮಾನ್ಯತಾ ವಿದ್ಯುತ್ ಉಪ-ಕೇಂದ್ರದಲ್ಲಿ ತುರ್ತುನಿರ್ವಹಣಾ ಕೆಲಸ ನಿರ್ವಹಿಸುವುದರಿಂದ ಜ.7 ರಂದು ಬೆಳಗ್ಗೆ 6 ರಿಂದ ಸಂಜೆ 6 ಗಂಟೆ ತನಕ ವಿದ್ಯುತ್ ವ್ಯತ್ಯಯವಾಗಲಿದೆ. ಫಿಡೆಲಿಟಿ ಬ್ಲಾಕ್, ಫಿಲಿಪ್ಸ್ ಬ್ಲಾಕ್, ಇನ್‌ಕ್ಯೂಬೇಟರ್ ಬ್ಲಾಕ್, ಐಬಿಎಂ, ಸೀಮೆನ್ಸ್, ಎಂಟಿ.ಪಿ ರೆಸಿಡೆನ್ಸ್, ಬಿಟಿಎಸ್ ಲ್ಯೂಸೆಂಟ್, ಎವಿನ್‌ರ್ಘುಡ್ ಬ್ಲಾಕ್‌ನಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.